7, (87) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಇತ್ತೀಚಿನ ಕನ್ನಡ ಚಲನಚಿತ್ರಗಳಿಂದ ಪ್ರದರ್ಶಿಸುವ ಅಶ್ಲೀಲ ದೃಶ್ಯಗಳು ಹಾಗೂ ಹಾಡುಗಳಿಂದ ಯುವ ಸಮೂಹದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ?

ಆ) ಹಾಗಿದ್ದಲ್ಲಿ ಈ ದಿಸೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಬಂದಿರುವುದಿಲ್ಲ.

ಆ) ಈ ವಿಷಯದ ವ್ಯಾಪ್ತಿಯು ಗೃಹ ಮತ್ತು ಕಂದಾಯ ಇಲಾಖೆಯ ಅಧೀನದಲ್ಲಿರುವುದರಿಂದ, ಅಂತಹ ಯಾವುದೇ ಘಟನೆಗಳು ಬಂದಾಗ ಆ ಇಲಾಖೆಗಳು ಸೂಕ್ತ ಕಾನೂನಿನ ಅಡಿಯಲ್ಲಿ ಕ್ರಮ ಜರುಗಿಸಲು ಅವಕಾಶವಿದೆ.

8, (109) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬೀದರ್ ಜಿಲ್ಲೆಯಲ್ಲಿರುವ 66/11 ಕೆ.ವಿ. ಮತ್ತು 33/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರಗಳ ಸಂಖ್ಯೆ ಎಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು); ?

ಆ) ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ಮೇಲ್ಕಂಡ ಪ್ರಮಾಣದ ವಿದ್ಯುತ್ ಸ್ವೀಕರಣಾ (ರಿಸೀವಿಂಗ್ ಸ್ಟೇಷನ್) ಕೇಂದ್ರಗಳನ್ನು ಸ್ಥಾಪಿಸಲಾಗುವುದು;?

ಇ) ಬೇಸಿಗೆ ಕಾಲವು ಸಮೀಪಿಸುತ್ತಿವುದರಿಂದ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಅತ್ಯಂತ ಹಿಂದುಳಿದ ಔರಾದ್ ತಾಲ್ಲೂಕಿನಲ್ಲಿ ಸಾರ್ವಜನಿಕರ ಮತ್ತು ರೈತರ ಜಮೀನುಗಳಿಗೆ ತಡೆ ರಹಿತವಾಗಿ ವಿದ್ಯುತ್ ಒದಗಿಸಲು ಮತ್ತು ವೋಲ್ಟೇಜ್ ಸುಧಾರಿಸಲು ಹಾಗೂ ಒಟ್ಟಾರೆಯಾಗಿ ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆಯನ್ನು ನೀಗಿಸಲು ಸರ್ಕಾರದ ಮುಂದಿನ ಕ್ರಮಗಳೇನು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಬೀದರ್ ಜಿಲ್ಲೆಯಲ್ಲಿ 220/110 ಕೆ.ವಿ., 110/11 ಕೆ.ವಿ. ಮತ್ತು 33/11 ಕೆ.ವಿ. ವಿದ್ಯುತ್ ಉಪಕೇಂದ್ರಗಳು ಇವೆ. ಈ ಜಿಲ್ಲೆಯಲ್ಲಿ ಯಾವುದೇ 66/11 ಕೆ.ವಿ. ವಿದ್ಯುತ್ ಉಪಕೇಂದ್ರ ಇರುವುದಿಲ್ಲ. ಬೀದರ್ ಜಿಲ್ಲೆಯಲ್ಲಿ ಹಾಲಿ ಇರುವ 220/110 ಕೆ.ವಿ., 110/11 ಕೆ.ವಿ. ಮತ್ತು 33/11 ಕೆ.ವಿ. ವಿದ್ಯುತ್ ಉಪಕೇಂದ್ರಗಳ ಸಂಖ್ಯೆಗಳ ವಿವರಗಳು ಈ ಕೆಳಕಂಡಂತಿದೆ.